					ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ತುಂಬಲು ಕ್ರಮ ಕೈಗೊಳ್ಳಲಾಗಿದೆ.
7)	ವಸತಿ / ಆಶ್ರಮ ಶಾಲಾ ಶಿಕ್ಷಕರು	22	02	20	2007-08ನೇ ಸಾಲಿನಿಂದ ಖಾಲಿ ಇದ್ದು ಹೊರ ಸಂಪನ್ಮೂಲ ಮುಖೇನ ಸೇವೆ ಪಡೆಯಲಾಗಿದೆ.
8)	ಅಡುಗೆಯವರು	30	11	19	2003-04ನೇ ಸಾಲಿನಿಂದ ಖಾಲಿ ಇದ್ದು ಹೊರ ಸಂಪನ್ಮೂಲ ಮುಖೇನ ಸೇವೆ ಪಡೆಯಲಾಗಿದೆ
9)	ಅಡುಗೆ ಸಹಾಯಕರು	19	08	11	
10)	ರಾತ್ರಿ ಕಾವಲುಗಾರರು	06	01	05	
11)	ಸಿಪಾಯಿ / ಸ್ವಚ್ಛತಾ ಸಿಬ್ಬಂದಿ	03	01	02	
	ಒಟ್ಟು	**99**	**34**	**65**	

ಇ) ಖಾಲಿ ಇರುವ 'ಸಿ' ವೃಂದದ ಹುದ್ದೆಗಳನ್ನು ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ನೇರ ನೇಮಕಾತಿ ಹಾಗೂ ಮುಂಬಡ್ತಿ ಮುಖೇನ ಭರ್ತಿ ಮಾಡಲು ಶೀಘ್ರ ಕ್ರಮ ಕೈಗೊಳ್ಳಲಾಗುವುದು.

ಫಲಾನುಭವಿಗಳ ವಿವರ

860 (1141) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞನಗರ) : ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಸರ್ವಜ್ಞ ನಗರ ವಿಧಾನ ಸಭಾ ಕ್ಷೇತ್ರಕ್ಕೆ ಎಷ್ಟು ಫಲಾನುಭವಿಗಳಿಗೆ ತರಬೇತಿ ನೀಡಲಾಗಿರುತ್ತದೆ;

ಆ) ನೀಡಲಾಗಿದ್ದಲ್ಲಿ, ಅನುದಾನ ಮತ್ತು ಸಾಲ ಮಂಜೂರಾತಿ ಮಾಡಲಾಗಿದೆಯೇ;

ಇ) ಇದ್ದಲ್ಲಿ, ಫಲಾನುಭವಿಗಳು ಯಾರು ಯಾರು; ವಿವರ ನೀಡುವುದು?

ಶ್ರೀ ಪ್ರೊಡಾ ಮುಮ್ತಾಜ್ ಅಲಿ ಖಾನ್, (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಯಾವುದೇ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಭಾಗ್ಯಲಕ್ಷ್ಮಿ ಯೋಜನೆಯ ಫಲಾನುಭವಿಗಳು

861 (1142) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞ ನಗರ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞ ನಗರ ವಿಧಾನ ಸಭಾ ಕ್ಷೇತ್ರಕ್ಕೆ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಸರ್ಕಾರದ ವತಿಯಿಂದ ಎಷ್ಟು ಫಲಾನುಭವಿಗಳಿಗೆ ಬಾಂಡ್ ವಿತರಿಸಲಾಗಿದೆ;

ಆ) ಇದ್ದಲ್ಲಿ, ಹೆಸರು ಮತ್ತು ವಿವರ ನೀಡುವುದು;

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಸರ್ವಜ್ಞ ನಗರ ವಿಧಾನ ಸಭಾ ಕ್ಷೇತ್ರಕ್ಕೆ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಸರ್ಕಾರದ ವತಿಯಿಂದ 587 ಫಲಾನುಭವಿಗಳಿಗೆ ಬಾಂಡ್ ವಿತರಿಸಲಾಗಿದೆ.

ಆ) ವಿವರಗಳನ್ನು ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ಒದಗಿಸ ಲಾಗುವುದು.